R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು
ವಿಶೇಷ ರಾಜ್ಯ ಪತ್ರಿಕೆ

ಭಾಗ– IV Part– IV	ಬೆಂಗಳೂರು, ಸೋಮವಾರ, 27, ಏಪ್ರಿಲ್, 2020 (ವೈಶಾಖ 07, ಶಕವರ್ಷ 1942) Bengaluru, MONDAY, 27, APRIL, 2020 (Vaishakha 07, ShakaVarsha 1942)	ನಂ. 150 No. 150

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 25 ಶಾಸನ 2019, ಬೆಂಗಳೂರು, ದಿನಾಂಕ: 27.04.2020

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2020ಕ್ಕೆ ಏಪ್ರಿಲ್ ತಿಂಗಳ 24ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 12 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 12

(2020ರ ಏಪ್ರಿಲ್ ತಿಂಗಳ 27ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020

(2020ರ ಏಪ್ರಿಲ್ ತಿಂಗಳ 24ನೇ ದಿನಾಂಕದಂದು ರಾಜ್ಯಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು (2000ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.- (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

2. 4ನೇ ಪ್ರಕರಣದ ತಿದ್ದುಪಡಿ.- ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ರ ಕರ್ನಾಟಕ ಅಧಿನಿಯಮ 29) 4ನೇ ಪ್ರಕರಣದ (ಇ) ಖಂಡದಲ್ಲಿ,-

(i) (i)ನೇ ಉಪಖಂಡದಲ್ಲಿ ``ನಿರ್ಮಾಣ ಕಾಮಗಾರಿಗಳ ಮತ್ತು ಸಮಾಲೋಚನಾ ಸೇವೆಗಳ" ಎಂಬ ಪದಗಳಿಗೆ ``ನಿರ್ಮಾಣ ಕಾಮಗಾರಿಗಳು ಮತ್ತು ಸಮಾಲೋಚನಾ ಸೇವೆಗಳು ಒಳಗೊಂಡಂತೆ ಸರಕುಗಳು ಮತ್ತು ಸೇವೆಗಳ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು; ಮತ್ತು

(ii) (ii)ನೇ ಉಪಖಂಡವನ್ನು ಬಿಟ್ಟುಬಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ದ್ವಾರಕನಾಥ್ ಬಾಬು)
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

PARLIAMENTARY AFFAIRS AND LEGISLATION SECRETARIAT
NOTIFICATION
NO. SAMVYASHAE 25 SHASANA 2019, Bangalore, dated: 27.04.2020

Ordered that the translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 12) in the English language, be published as authorised by the Governor of Karnataka under clause (3) of Article 348 of the Constitution of India in the Karnataka Gazette Extraordinary for general information.

The following translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 12) in the English language is published in the Official Gazette under the authority of the Governor of Karnataka under clause (3) of Article 348 of the Constitution of India.

KARNATAKA ACT NO. 12 OF 2020

(First Published in the Karnataka Gazette Extra-ordinary on the 27th day of April, 2020)

THE KARNATAKA TRANSPARENCY IN PUBLICPROCUREMENTS (AMENDMENT) ACT, 2020

(Received the assent of the Governor on the 24th day of April, 2020)

An Act further to amend the Karnataka Transparency in Public Procurements Act, 1999.

Whereas it is expedient further to amend the Karnataka Transparency in Public Procurements Act, 1999 (Karnataka Act 29 of 2000) for the purposes hereinafter appearing;

Be it enacted by the Karnataka State Legislature in the seventy first year of the Republic of India as follows:-

1. Short title and commencement.- (1) This Act may be called the Karnataka Transparency in Public Procurements (Amendment) Act, 2020.

(2) It shall come into force at once.

2. Amendment of section 4.- In the Karnataka Transparency in Public Procurements Act, 1999 (Karnataka Act 29 of 2000) in section 4, in clause (e),-

(i) in sub-clause (i)for the words “construction works and consultancy services” the words “goods and services including construction works and consultancy services”shall be substituted; and

(ii) sub-clause (ii) shall be omitted.

The above translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2020 (2000ರ ಕರ್ನಾಟಕ ಅಧಿನಿಯಮ 12) be published in the official Gazette under clause (3) of Article 348 of the Constitution of India.

VAJUBHAI VALA
GOVERNOR OF KARNATAKA

By Order and in the name of
the Governor of Karnataka,

(K.DWARAKANATH BABU)
Secretary to Government
Department of Parliamentary Affairs and
Legislation

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

SUNIL GARDE